# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕಿರಿಯ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಕ.ಅ/ವಾ-164/ಪಿಆರ್/2020-21 ದಿನಾಂಕ: 21-01-2021

### ಜನವರಿ ಮಾಹೆಯ 2ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 21-01-2021 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ
ಸಮಯ : ಸಂಜೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಆರ್. ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಸಂದೀಪ್. ಬಿ.ಸಿ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಗಿರಿನಗರ) ಉಪವಿಭಾ |
| 3 | ಶ್ರೀ ನಂದೀಶ್ .ಎಸ್ | ಕಿರಿಯ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ 164, ವಿದ್ಯಾಪೀಠ |
| 4 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 5 | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 6 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 7 | ಮಾರ್ಷಲ್ | ವಾರ್ಡ್-164, ವಿದ್ಯಾಪೀಠ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

I. ವಾರ್ಡ್-164ರ ವ್ಯಾಪ್ತಿಯಲ್ಲಿ ಸರ್ಕಾರ ಜಾಗ, ರಸ್ತೆ / ಫುಟ್‌ಪಾತ್ ಒತ್ತುವರಿ ಮಾಡಿಕೊಂಡು ಕಟ್ಟಿರುವ ದೇವಸ್ಥಾನ, ಚರ್ಚ್, ಮತ್ತು ಮಸೀದಿಗಳನ್ನು ಕಂದಾಯ ಮತ್ತು ಕಾಮಗಾರಿ ಇಲಾಖೆ ವತಿಯಿಂದ ಜಂಟಿಯಾಗಿ ತಪಾಸಣೆಯನ್ನು ನಡೆಸಿ, ಗುರಿತಿಸಿ ಮೇಲಾಧಿಕಾರಿಗಳಿಗೆ ವರದಿಯನ್ನು ನೀಡಲು ದಿನಾಂಕ: 20-01-2021 ರಂದು ನಡೆದ ಕಂದಾಯ ಅಧಿಕಾರಿಗಳ ಕಛೇರಿಯಲ್ಲಿ ನಡೆದ ಸಭೆಯಲ್ಲಿ ತಿಳಿಸಿರುವುದರಿಂದ ಸದರಿ ವಿಷಯವನ್ನು ವಾರ್ಡ್ ಸಮಿತಿ ಸಭೆಯಲ್ಲಿ ಕಿರಿಯ ಅಭಿಯಂತರರು ತಿಳಿಸಿರುತ್ತಾರೆ.

(ಪು.ತಿ.ನೋ)

2. ಕೋವಿಡ್-19 ಲಸಿಕೆಗೆ ಸಂಬಂಧಿಸಿದಂತೆ ದಿನಾಂಕ: 18-01-2021 ರಂದು Primary Health Staff ರವರಿಗೆ ವಿದ್ಯಾಪೀಠ ಪ್ರೈಮರಿ ಹೆಲ್ತ್ ಸೆಂಟರ್ ನಲ್ಲಿ 14 ಜನರಿಗೆ ಲಸಿಕೆ ನೀಡಿದ್ದು, ಹಾಗೂ ಸಿ.ಟಿ. ಬೆಡ್ ಪ್ರೈಮರಿ ಹೆಲ್ತ್ ಸೆಂಟರ್‌ನಲ್ಲಿ 19 ಜನರಿಗೆ ಲಸಿಕೆಯನ್ನು ನೀಡಿರುವುದಾಗಿ ಸಂಬಂಧಪಟ್ಟ ವೈದ್ಯರು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ. ಲಸಿಕೆ ನೀಡಿರುವ ವಿವರಗಳನ್ನು ಕೋವಿಡ್-19 ಆಪ್‌ನಲ್ಲಿ ಅಪ್‌ಲೋಡ್ ಮಾಡಲು ತಿಳಿಸಿರುತ್ತಾರೆ. 2ನೇ ಬಾರಿ ಲಸಿಕೆ ನೀಡಲು ಮುಂದಿನ ವಾರ ನೀಡಲು ವೈದ್ಯರು ತಿಳಿಸಿರುತ್ತಾರೆ.

3. ಘನತ್ಯಾಜ್ಯ ನಿರ್ವಹಣೆಯ ಕಸ ವಿಲೇವಾರಿಯು 5 ಟನ್ ಲೋಡ್ ಆಗುತ್ತದೆ ಎಂದು ಹಾಗೂ ಪ್ರತಿ ದಿನ 02 ಕಾಂಪ್ಯಾಕ್ಟರ್‌ಗಳು ಕಸ ವಿಲೇವಾರಿಗೆ ಸಂಬಂಧಪಟ್ಟಂತೆ ಕಾರ್ಯನಿರ್ವಹಿಸುತ್ತಿರುವುದೆಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

4. ಕೋವಿಡ್-19ಗೆ ಸಂಬಂಧಪಟ್ಟಂತೆ ಈ ವಾರದಲ್ಲಿ ಯಾವುದೇ ಪಾಸಿಟಿವ್ ಕೇಸ್‌ಗಳು ಬಂದಿರುವುದಿಲ್ಲವೆಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

5. ವಾರ್ಡ್-164 ವ್ಯಾಪ್ತಿಯಲ್ಲಿ ಬರುವ ರಸ್ತೆಗಳಿಗೆ ಡಾಂಬರೀಕರಣ ಕಾಮಗಾರಿ ಪ್ರಾರಂಭವಾಗಿರುವುದೆಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

6. ವಾರ್ಡ್ ವ್ಯಾಪ್ತಿಯಲ್ಲಿ ಬಜೆಟ್ ಕಾಮಗಾರಿಗಳಿಗಾಗಿ 2020-21 ಮತ್ತು 2021-22ನೇ ಸಾಲಿನ ಬಿಡ್ಸ್‌ನ್ನು ತಯಾರಿಸಲು ಮತ್ತು ನಿರ್ವಹಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡು ಬಿಡ್ಸ್ ಮಾಹಿತಿಯನ್ನು ಆನ್‌ಲೈನ್ ನಲ್ಲಿ ಅಳವಡಿಸಿ ಪೂರ್ಣಗೊಳಿಸಲಾಗಿರುತ್ತದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಕಿರಿಯ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃಬೆಂ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.